## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 135 ಟಿಡಿಬಿ 2020, ದಿನಾಂಕ: 18-09-2020.
2. ಮಾನ್ಯ ಪ್ರವಾಸೋದ್ಯಮ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:24.06.2021ರಂದು ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ರ ಕಾರ್ಯವಿಧಾನ ಮಾರ್ಗಸೂಚಿಗಳ ಬಗ್ಗೆ ಹಾಗೂ ಇಲಾಖಾ ಪ್ರಗತಿ ಪರಿಶೀಲನೆ ಕುರಿತು ನಡೆದ ಸಭೆಯ ನಡವಳಿಗಳು.

11 MAR 2022

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: 1ರ ಆದೇಶದಲ್ಲಿ ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ನ್ನು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಂತೆ ರೂಪಿಸಿ, ಸದರಿ ನೀತಿಯಲ್ಲಿ ಅಳವಡಿಸಲಾಗಿರುವ ಪ್ರೋತ್ಸಾಹಧನ, ರಿಯಾಯಿತಿ ಮತ್ತು ಸಬ್ಸಿಡಿಗಳೊಂದಿಗೆ ಜಾರಿಗೊಳಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ. ಸದರಿ ಪ್ರವಾಸೋದ್ಯಮ ನೀತಿಯು ಈ ಆದೇಶ ಜಾರಿಗೆ ಬಂದ ದಿನಾಂಕದಿಂದ 05 ವರ್ಷಗಳ ಅವಧಿವರೆಗೆ ಜಾರಿಯಲ್ಲಿರುತ್ತದೆ.

ಅನುಬಂಧದಲ್ಲಿರುವ ಪ್ರವಾಸೋದ್ಯಮ ಯೋಜನೆಗಳ ಅಭಿವೃದ್ಧಿಗೆ ಪೂರಕವಾಗಿ ಪ್ರವಾಸೋದ್ಯಮ ಕ್ಷೇತ್ರದಲ್ಲಿನ ವಿವಿಧ ಹೂಡಿಕೆ, ಸೇವಾವರ್ಗಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ, ಸಕ್ಷಮ ಪ್ರಾಧಿಕಾರದಿಂದ ಪ್ರತ್ಯೇಕ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು. ಪ್ರವಾಸೋದ್ಯಮ ನೀತಿಯನ್ವಯ ಲಭ್ಯವಾಗುವ ವಿವಿಧ ಪ್ರೋತ್ಸಾಹಧನ ಸಬ್ಸಿಡಿಗಳು ಮತ್ತು ರಿಯಾಯಿತಿಗಳ ಕುರಿತು ಕಾರ್ಯಾಚರಣೆ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ರಲ್ಲಿ ಪ್ರವಾಸೋದ್ಯಮಕ್ಕೆ ಅನ್ವಯಿಸಿದ ಯೋಜನೆಗಳಿಗೆ ಸಂಬಂಧಿಸಿದಂತೆ ಇತರೆ ಇಲಾಖೆಗಳಿಂದ ನೀಡಲಾಗುವ ಸೌಲಭ್ಯ ಬೆಂಬಲ ಮತ್ತು ರಿಯಾಯಿತಿಗಳು ಹಾಗೂ ಮಾರ್ಗಸೂಚಿಗಳ ಕುರಿತು ಸಂಬಂಧಿಸಿದ ಇಲಾಖೆಗಳು ಪ್ರತ್ಯೇಕ ಆದೇಶಗಳನ್ನು ಹೊರಡಿಸತಕ್ಕದ್ದು ಎಂಬುದಾಗಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: 2ರ ನಡವಳಿಯಲ್ಲಿ ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ಕ್ಕೆ ಈ ಕೆಳಕಂಡಂತೆ ಪ್ರಸ್ತಾವಿತ ತಿದ್ದುಪಡಿಗಳನ್ನು ತರಲು ಸಭೆಯಲ್ಲಿ ತೀರ್ಮಾನಿಸಲಾಗಿದೆ.

i). ಕೇಂದ್ರಿಕೃತ ಪ್ರವಾಸೋದ್ಯಮ ತಾಣಗಳ (FTD) ಪಟ್ಟಿ ತಿದ್ದುಪಡಿ.

ii). ಕಲ್ಯಾಣ ಕರ್ನಾಟಕದ ಹೋಟೆಲ್ ಯೋಜನೆ- ಪ್ರಿಮಿಯಂ ಹೋಟೆಲ್ ಗಳಿಗೆ ಬಂಡವಾಳ ಹೂಡಿಕೆಗೆ ಶೇಕಡ 5 ರಷ್ಟು ಹೆಚ್ಚುವರಿ ಸಹಾಯಧನ ಹೆಚ್ಚಳ.

iii). ಕರ್ನಾಟಕ ಪ್ರವಾಸೋದ್ಯಮ ನೀತಿ 2020-26ರ ಕಾಲಾವಧಿಯನ್ನು ಅಂದರೆ ದಿನಾಂಕ: 17.09.2026 ರವರೆಗೆ ವಿಸ್ತರಿಸಲು ಸಚಿವ ಸಂಪುಟದ ಅನುಮೋದನೆ ಪಡೆಯುವುದು.

iv). ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ರ ಪ್ರಸ್ತಾವಿತ ಬಜೆಟ್ ಅನ್ನು ರೂ.426.00 ಕೋಟಿಯಿಂದ ರೂ. 1000.00 ಕೋಟಿಗಳಿಗೆ ಪರಿಷ್ಕರಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು.

v). ಸುಸ್ಥಿರ ಕ್ರಮಗಳನ್ನು ಅಳವಡಿಸಿಕೊಂಡಿರುವ ಯೋಜನೆಗಳಿಗೆ ಜಿಲ್ಲಾ ಹಂತದಲ್ಲಿ ಪ್ರೋತ್ಸಾಹಧನ ನೀಡುವುದು.

vi). ಪ್ರವಾಸೋದ್ಯಮ ನೀತಿಯಡಿಯಲ್ಲಿ ಮುದ್ರಾಂಕ ಮತ್ತು ನೋಂದಣಿ ಶುಲ್ಕ ವಿನಾಯಿತಿ ನೀಡುವ ಪ್ರಸ್ತಾವನೆಗೆ ಸಂಬಂಧಿಸಿದಂತೆ ಕಂದಾಯ ಇಲಾಖೆಯು ದಿನಾಂಕ:09.03.2021 ರಂದು ಹೊರಡಿಸಿರುವ ಅಧಿಸೂಚನೆಯಂತೆ ನೀತಿಯಲ್ಲಿ ಮುಂದ್ರಾಂಕ ಮತ್ತು ನೋಂದಣಿ ಶುಲ್ಕಗಳಲ್ಲಿ ವಿನಾಯಿತಿಗೆ ಸೂಕ್ತ ತಿದ್ದುಪಡಿಗಳನ್ನು ಮಾಡಲು.

vii). ಬಳ್ಳಾರಿ, ಬೆಳಗಾವಿ, ದಾವಣಗೆರೆ, ಕಲಬುರಗಿ, ಶಿವಮೊಗ್ಗ, ತುಮಕೂರು ಮತ್ತು ವಿಜಯಪುರ ಜಿಲ್ಲಾ ಮಿತಿಯಲ್ಲಿ ಹೋಟೆಲ್ ಯೋಜನೆಗಳಿಗೆ ಬಂಡವಾಳ ಹೂಡಿಕೆ ಸಹಾಯಧನಗಳನ್ನು ಅನುಮತಿಸುವುದು.

28/09/2021

..2..

viii). ಪೂರಕ ಮೂಲಸೌಕರ್ಯ ಸಹಾಯಧನವನ್ನು ರಿಯಾಯಿತಿ ಪಟ್ಟಿಯಿಂದ ಕೈಬಿಡುವುದು,

ix). ರಾಜ್ಯ ಮಟ್ಟದ ಅಧಿಕಾರಯುಕ್ತ ಸಮಿತಿ ಮತ್ತು ಜಿಲ್ಲಾ ಪ್ರವಾಸೋದ್ಯಮ ಸಮಿತಿಗಳ ಸದಸ್ಯತ್ವ ಮತ್ತು ಜವಾಬ್ದಾರಿಗಳ ತಿದ್ದುಪಡಿ.

x). ಖಾಸಗಿ ವಲಯದ ಪ್ರತಿನಿಧಿಗಳನ್ನು ಜಿಲ್ಲಾ ಪ್ರವಾಸೋದ್ಯಮ ಸಮಿತಿ ಮತ್ತು ರಾಜ್ಯ ಮಟ್ಟದ ಅಧಿಕಾರಯುಕ್ತ ಸಮಿತಿಯಲ್ಲಿ ಈ ಕೆಳಕಂಡಂತೆ ಸೇರಿಸುವುದು.

ಎ) ಜಿಲ್ಲಾ ಪ್ರವಾಸೋದ್ಯಮ ಸಮಿತಿ – ಕರ್ನಾಟಕ ಟೂರಿಸಂ ಸೊಸೈಟಿ (ಕೆ.ಟಿ.ಎಸ್) ನಾಮ ನಿರ್ದೇಶನ ಮಾಡಿದ 3 ಪ್ರತಿನಿಧಿಗಳು.

ಬಿ) ಅಧಿಕಾರಯುಕ್ತ ಸಮಿತಿ - ಕರ್ನಾಟಕ ಟೂರಿಸಂ ಸೊಸೈಟಿ (ಕೆ.ಟಿ.ಎಸ್)ಯಿಂದ ಒಬ್ಬರು, ಐ.ಎ.ಟಿ.ಒ ಅಥವಾ ಸಮಾನವಾದ ರಾಷ್ಟ್ರಮಟ್ಟದ ಟ್ರಾವೆಲ್ ಮತ್ತು ಟೂರಿಸಂ ಸಂಸ್ಥೆ ಯಿಂದ ತಲಾ 1 ಪ್ರತಿನಿಧಿ, ಎಫ್.ಹೆಚ್.ಆರ್.ಎ.ಐ ಅಥವಾ ಸಮಾನವಾದ ರಾಷ್ಟ್ರಮಟ್ಟದ ಹೋಟೆಲ್ ಮತ್ತು ಹಾಸ್ಪಿಟಾಲಿಟಿ ಸಂಸ್ಥೆ ಯಿಂದ ತಲಾ 1 ಪ್ರತಿನಿಧಿ.

ಮೇಲಿನ ಅಂಶಗಳನ್ನು/ವಿವರಗಳನ್ನು ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ರಲ್ಲಿ ಪರಿಷ್ಕರಿಸಿ ಪ್ರಕಟಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಟಿಒಆರ್ 135 ಟಿಡಿಬಿ 2020,</u>
<u>ಬೆಂಗಳೂರು, ದಿನಾಂಕ: 28-09-2021.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, **ಸರ್ಕಾರದ ಆದೇಶ ಸಂಖ್ಯೆ: ಟಿಒಆರ್ 135 ಟಿಡಿಬಿ 2020, ದಿನಾಂಕ: 18-09-2020ರಲ್ಲಿ** ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ನ್ನು ಸದರಿ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಂತೆ ರೂಪಿಸಿ, ಸದರಿ ನೀತಿಯಲ್ಲಿ ಅಳವಡಿಸಲಾಗಿರುವ ಪ್ರೋತ್ಸಾಹಧನ, ರಿಯಾಯಿತಿ ಮತ್ತು ಸಬ್ಸಿಡಿಗಳೊಂದಿಗೆ ಜಾರಿಗೊಳಿಸಲು ಸರ್ಕಾರದ ಅನುಮೋದನೆ ನೀಡಲಾಗಿದ್ದು, ಸದರಿ ಆದೇಶಕ್ಕೆ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಂತೆ ತಿದ್ದುಪಡಿಯನ್ನು ತರಲು ಸರ್ಕಾರದ ಪರಿಷ್ಕೃತ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ/188/ವೆಚ್ಚ-7/2021, ದಿನಾಂಕ: 23-09-2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Vimala 28/09/2021

**(ವಿಮಲಾಕ್ಷಿ.ಬಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಪ್ರವಾಸೋದ್ಯಮ ಇಲಾಖೆ.

28/9/21

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 200 ಪ್ರತಿಗಳನ್ನು ಒದಗಿಸಲು ಕೋರಿದೆ.

1. ಮಹಾಲೇಖಪಾಲರು (ಲೆಕ್ಕಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಅಧ್ಯಕ್ಷರು, ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ಟಾಸ್ಕ್ ಫೋರ್ಸ್, ಬೆಂಗಳೂರು.
4. ಎಲ್ಲಾ ಪ್ರಾದೇಶಿಕ ಆಯುಕ್ತರು.
5. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಖನಿಜ ಭವನ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

..3..

8. ವ್ಯವಸ್ಥಾಪಕ ನಿರ್ದೇಶಕರು, ಅರಣ್ಯ, ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ, ಖನಿಜ ಭವನ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
10. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ, ಮೈಸೂರು.
11. ಎಲ್ಲಾ ಜಿಲ್ಲೆಗಳ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಮುಖ್ಯಸ್ಥರು.
12. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ(ಸಚಿವ ಸಂಪುಟ), ವಿಧಾನಸೌಧ.
13. ಮಾನ್ಯ ಪ್ರವಾಸೋದ್ಯಮ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
14. ಅಧ್ಯಕ್ಷರು, ಕರ್ನಾಟಕ ಟೂರಿಸಂ ಸೊಸೈಟಿ, ಬೆಂಗಳೂರು.
15. ಶಾಖಾರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.

*****